**ಕರ್ನಾಟಕ ಸರ್ಕಾರ**
**ಆಯುಕ್ತರ ಕಛೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,**
**ನಂ.16-ಡಿ, 3ನೇ ಮಹಡಿ, ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ,**
**ವಸಂತನಗರ, ಬೆಂಗಳೂರು-560001. ಇ-ಮೇಲ್: bcwd.hostels@karnataka.gov.in**

---

ಸಂ: **BCWD-12022/4/2024-BCWD_HOSTEL-BCWD** ದಿನಾಂಕ: **27.06.2024**

ಗೆ:
ರಾಜ್ಯ ಎಲ್ಲಾ ಜಿಲ್ಲೆಗಳ
ಉಪ ನಿರ್ದೇಶಕರು/ಜಿಲ್ಲಾ ಅಧಿಕಾರಿಗಳು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಮಾನ್ಯರೆ,

ವಿಷಯ: 2024-25ನೇ ಸಾಲಿನ ಇಲಾಖೆಯ ಮೆಟ್ರಿಕ್ ನಂತರದ (ಪಿ.ಯು.ಸಿ ಮತ್ತು ಪಿ.ಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ) ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸುವ ಬಗ್ಗೆ.

*****

2024-25ನೇ ಸಾಲಿಗೆ ಮೆಟ್ರಿಕ್ ನಂತರದ (ಪಿ.ಯು.ಸಿ ಮತ್ತು ಪಿ.ಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ) ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪಿ.ಯು.ಸಿ ಮತ್ತು ಪಿ.ಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದ್ದು, ಈ ಪತ್ರಕ್ಕೆ ಲಗತ್ತಿಸಿರುವ ಕಾಲಾನುಕ್ರಮಣಿಕೆಯಂತೆ ಕ್ರಮವಹಿಸಲು ಹಾಗೂ ಈ ಕುರಿತು ಪ್ರಕಟಣೆಯನ್ನು ಜಿಲ್ಲಾಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಪ್ರಚುರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

**ನಿಮ್ಮ ವಿಶ್ವಾಸಿ**

**ಆಯುಕ್ತರು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು**

**2024-25ನೇ ಸಾಲಿನ ಮೆಟ್ರಿಕ್ ನಂತರದ (ಪಿ.ಯು.ಸಿ ಮತ್ತು ಪಿ.ಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ) ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕಲ್ಪಿಸಲು ನಿಗದಿಪಡಿಸಿರುವ ಕಾಲಾನುಕ್ರಮಣಿಕೆ:**

| ಕ್ರ. ಸಂ | ವಿವರ | ನಿಗದಿಪಡಿಸಿದ ದಿನಾಂಕ |
|---|---|---|
| 01 | ಹೊಸ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 28.06.2024 |
| 01 | ಹೊಸ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 20.07.2024 |
| 02 | ಹೊಸ ಅರ್ಜಿಗಳನ್ನು ತಾಲ್ಲೂಕು ಕಲ್ಯಾಣ ಅಧಿಕಾರಿಗಳು ಪರಿಶೀಲನೆ ಮಾಡಲು ನಿಗದಿಪಡಿಸಿದ ಅಂತಿಮ ದಿನಾಂಕ: | 23.07.2024 |
| 03 | ತಾಲ್ಲೂಕು ಸಮಿತಿಯ ಮೂಲಕ ಆಯ್ಕೆಯಾದ ಹೊಸ ವಿದ್ಯಾರ್ಥಿಗಳ ಆಯ್ಕೆ ಪಟ್ಟಿ ಪ್ರಕಟಣೆಯ ದಿನಾಂಕ | 29.07.2024 |
| 04 | ಆಯ್ಕೆಯಾದ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯಲು ನಿಗದಿಪಡಿಸಿದ ಅಂತಿಮ ದಿನಾಂಕ | 31.07.2024 |

**ಆಯುಕ್ತರು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು.**

**ಕರ್ನಾಟಕ ಸರ್ಕಾರ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಆಯುಕ್ತರ ಕಛೇರಿ, ನಂ.16/-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ**
**ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-52.**

ಸಂಖ್ಯೆ: **BCWD-12022/4/2024-BCWD_HOSTEL-BCWD** ದಿನಾಂಕ: **27.06.2024**

**ಪ್ರಕಟಣೆ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ (ಪಿ.ಯು.ಸಿ ಮತ್ತು ಪಿ.ಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ**

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ಪಿ.ಯು.ಸಿ ಮತ್ತು ಪಿ.ಯು ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ**

| | |
|---|---|
| ಪ್ರವರ್ಗ-1, ಎಸ್.ಸಿ & ಎಸ್.ಟಿ | ರೂ.2.50 ಲಕ್ಷ |
| ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ | ರೂ.1.00 ಲಕ್ಷ |

- ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು.
- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 20.07.2024.
- ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ನೋಡಬಹುದು.
- ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು

**ಸಂಪರ್ಕಿಸಬಹುದಾದ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005**

**ಆಯುಕ್ತರು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು.**